ಕರ್ನಾಟಕ ಸರ್ಕಾರ

**ಜುಲೈ 27, 2017**

# ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

**ಬೆಂಗಳೂರು, ಜುಲೈ 27:**

ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಜೇವರ್ಗಿ ವಿಧಾನ ಸಭಾ ಕ್ಷೇತ್ರದಿಂದ ಏಳು ಬಾರಿ ಗೆಲುವು ಸಾಧಿಸಿದ್ದ ಧರ್ಮಸಿಂಗ್ ಅವರು ಒಮ್ಮೆ ಗುಲಬರ್ಗಾ ಹಾಗೂ ಮತ್ತೊಮ್ಮೆ ಬೀದರ್ ಕ್ಷೇತ್ರದಿಂದ ಲೋಕ ಸಭೆಯನ್ನು ಪ್ರವೇಶಿಸಿದ್ದರು. ಡಿ. ದೇವರಾಜ ಅರಸು, ಆರ್. ಗುಂಡೂರಾವ್, ಎಸ್. ಬಂಗಾರಪ್ಪ, ಎಂ. ವೀರಪ್ಪ ಮೊಯಿಲಿ ಹಾಗೂ ಎಸ್ ಎಂ ಕೃಷ್ಣ ನೇತೃತ್ವದ ಸರ್ಕಾರಗಳಲ್ಲಿ ಧರ್ಮಸಿಂಗ್ ಅವರು ಸೇವೆ ಸಲ್ಲಿಸಿದ್ದರು. ಆಡು ಮುಟ್ಟದ ಸೊಪ್ಪಿಲ್ಲ ! ಧರ್ಮಸಿಂಗ್ ಅವರು ನಿರ್ವಹಿಸದ ಖಾತೆಗಳೇ ಇಲ್ಲ !! ಎಂಬಂತೆ ಅಬಕಾರಿ, ಗೃಹ, ಸಮಾಜ ಕಲ್ಯಾಣ, ನಗರಾಭಿವೃದ್ಧಿ, ಕಂದಾಯ ಹಾಗೂ ಲೋಕೋಪಯೋಗಿ ಸೇರಿದಂತೆ ಪ್ರಮುಖ ಖಾತೆಗಳನ್ನು ಸಮರ್ಥವಾಗಿ ನಿಭಾಯಿಸಿದ್ದರು. ನಂತರ, ಮುಖ್ಯಮಂತ್ರಿ ಪದವಿಯನ್ನು ಅಲಂಕರಿಸಿ ಜನಪ್ರಿಯ ಮುಖ್ಯಮಂತ್ರಿ ಎನಿಸಿದ್ದರು.

ಪಕ್ಷೇತರ ಅಭ್ಯರ್ಥಿಯಾಗಿ ಅಂದಿನ ಗುಲಬರ್ಗಾ ನಗರಸಭಾ ಸದಸ್ಯರಾಗಿ ಪ್ರ ಪ್ರಥಮ ಬಾರಿಗೆ ಸಾರ್ವಜನಿಕ ಜೀವನವನ್ನು ಪ್ರವೇಶಿಸಿದ ಧರ್ಮಸಿಂಗ್ ಅವರು ಐದೂವರೆ ದಶಕಗಳಿಗಿಂತಲೂ ಹೆಚ್ಚು ಕಾಲ ಕಾಂಗ್ರೆಸ್ ಪಕ್ಷದ ಕಟ್ಟಾಳಾಗಿದ್ದರು. ಲೋಕಸಭೆಯಲ್ಲಿನ ಕಾಂಗ್ರೆಸ್ ಪಕ್ಷದ ನಾಯಕ ಎಂ. ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಧರ್ಮಸಿಂಗ್ ಅವರು ಹೊಂದಿದ್ದ ಸ್ನೇಹ ಮತ್ತು ಒಡನಾಟ ಕೇವಲ ರಾಜ್ಯ ರಾಜಕಾರಣದಲ್ಲಿ ಮಾತ್ರವಲ್ಲ, ರಾಷ್ಟ್ರ ರಾಜಕಾರಣದ ಗಮನವನ್ನೂ ಸೆಳೆದಿತ್ತು.

ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಂದ ಹಿಡಿದು ಅಧಿನಾಯಕರವರೆಗೆ ಎಲ್ಲರ ಪ್ರೀತಿ ಮತ್ತು ವಿಶ್ವಾಸಕ್ಕೆ ಪಾತ್ರರಾಗಿದ್ದ ಧರ್ಮಸಿಂಗ್ ಅವರು ಪ್ರತಿ ಪಕ್ಷಗಳ ಎಲ್ಲಾ ನಾಯಕರೂ ಕೂಡಾ ಗೌರವಿಸುವ ಹಾಗೂ ಮೆಚ್ಚುವ ವ್ಯಕ್ತಿತ್ವವನ್ನು ಹೊಂದಿದ್ದರು.

ಧರ್ಮಸಿಂಗ್ ಅವರ ಸಚಿವ ಸಂಪುಟದಲ್ಲಿ ಉಪ ಮುಖ್ಯಮಂತ್ರಿಯಾಗಿ ಕಾರ್ಯ ನಿರ್ವಹಿಸಿದ ಸಂದರ್ಭದಲ್ಲಿ ಅವರು ನನಗೆ ನೀಡಿದ ಸ್ವಾತಂತ್ರ್ಯ ಹಾಗೂ ತೋರಿದ ಪ್ರೀತಿಯನ್ನು ನಾನೆಂದೂ ಮರೆಯಲಾರೆ ! ಪ್ರೀತಿಯ ಕಾರಂಜಿಯಂತಿದ್ದ ಧರ್ಮಸಿಂಗ್ ಅವರು ನಿಧನರಾಗಿದ್ದಾರೆ. ನಾವೆಲ್ಲರೂ ದುಃಖ ಸಾಗರದಲ್ಲಿದ್ದೇವೆ.

ಅಜಾತ ಶತ್ರು ಧರ್ಮಸಿಂಗ್ ಅವರ ಎಳೆ ನಗೆ ಹಾಗೂ ಮಮತೆಯ ನೋಟ ಇನ್ನು ನಮ್ಮೆಲ್ಲರಿಗೂ ಕೇವಲ ನೆನಪು ಮಾತ್ರ. ಎಂಬುದು ನನ್ನಲ್ಲಿ ಏಕಕಾಲಕ್ಕೆ ನೋವು ಹಾಗೂ ದುಃಖವನ್ನು ತಂದಿದೆ.

ಧರ್ಮಸಿಂಗ್ ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ. ಧರ್ಮಸಿಂಗ್ ಅವರ ಪುತ್ರರಾದ ರಾಜ್ಯ ವಿಧಾನ ಪರಿಷತ್ತಿನ ಸದಸ್ಯರಾದ  ವಿಜಯ್ ಸಿಂಗ್ ಹಾಗೂ ರಾಜ್ಯ ವಿಧಾನ ಸಭೆಯ ಸದಸ್ಯರಾದ ಅಜಯ್ ಸಿಂಗ್ ಒಳಗೊಂಡಂತೆ ಧರ್ಮಸಿಂಗ್ ಅವರ ಕುಟುಂಬದ ಎಲ್ಲಾ ಸದಸ್ಯರು ಅಪಾರ ಅಭಿಮಾನಿಗಳು ಹಾಗೂ ಅನುಯಾಯಿಗಳಿಗೆ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

***********

ಡಿ ಪಿ ಎಂ